ಕರ್ನಾಟಕ ಸರ್ಕಾರ

# ಗ್ರಾಮ ಪಂಚಾಯತ ಕಾರ್ಯಾಲಯ, ಉಳವಿ -581187

## ತಾಲೂಕ : ಜೋಯಿಡಾ. ಜಿಲ್ಲಾ : ಉತ್ತರ ಕನ್ನಡ


ದೂರವಾಣಿ ಸಂಖ್ಯೆ : 08383-250821

E-mail : gpulavi@gmail.com

ಅಧ್ಯಕ್ಷರು : ಶ್ರೀ ಮಂಜುನಾಥ ಅರ್ಜುನ ಮೊಕಾಶಿ

ಮೊಬೈಲ್ ನಂ.: 94810 50892

ಮೇಲ್ : mamokashi20@gmail.com


ದಿನಾಂಕ.................................

ಗೆ,

ಸನ್ಮಾನ್ಯ ಶ್ರೀ ಬಿ. ಎಸ್. ಯಡಿಯೂರಪ್ಪ,<br>
ಮಾನ್ಯ ಮುಖ್ಯಮಂತ್ರಿಗಳು,<br>
ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು

ಮಾನ್ಯರೇ,

ವಿಷಯ: ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್–19 ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ, ಕರ್ನಾಟಕದಲ್ಲಿ ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್–19 ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್‍ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ. ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಮುಖವಾದದ್ದು. ಗ್ರಾಮ ಪಂಚಾಯತ ಒಂದು ಸ್ಥಳೀಯ ಸ್ವಯಂ ಸರ್ಕಾರ. ಹೀಗಾಗಿಯೇ ಇಡೀ ರಾಜ್ಯದಾದ್ಯಂತ ಕೋವಿಡ್– 19 ರ ಪರಿಸ್ಥಿತಿ ಘೋಷಣೆ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂ ಸೇವಾ ಸಂಸ್ಥೆಗಳ, ಸ್ವಯಂ ಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತದ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು, ಅಲ್ಲದೇ ನಮ್ಮ ಗ್ರಾಮ ಪಂಚಾಯತಿಯು ಉತ್ತರ ಕನ್ನಡ ಜಿಲ್ಲೆಯ ಅತ್ಯಂತ ಗುಡ್ಡಗಾಡು ಪ್ರದೇಶವಾದ ಜೋಯಿಡಾ ತಾಲೂಕಿನ ಒಂದು ಗ್ರಾಮ ಪಂಚಾಯತಿಯಾಗಿರುತ್ತದೆ. ನಮ್ಮ ಗ್ರಾಮ ಪಂಚಾಯತಿಯ ಪ್ರತಿಯೊಂದು ಹಳ್ಳಿಯು ಕೂಡ ಕುಗ್ರಾಮವಾಗಿರುತ್ತದೆ. ಕೋವಿಡ್– 19 ಅಟ್ಟಹಾಸ ಮೆರೆಯುತ್ತಿರುವ ಸಂದರ್ಭದಲ್ಲೇ ನಮ್ಮ ಪಂಚಾಯತಿ ವ್ಯಾಪ್ತಿಯಲ್ಲಿ ಮಂಗನ ಕಾಯಿಲೆಯು ಸಹ ವಕ್ಕರಿಸಿಕೊಂಡು ಜನರಲ್ಲಿ ಭಯದ ವಾತಾವರಣ ನಿರ್ಮಾಣವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಜನಪ್ರತಿನಿಧಿಗಳಾದ ನಾವು ಜನರಿಗೆ ಧೈರ್ಯ ತುಂಬುವ ಕೆಲಸ ಮಾಡಬೇಕಾಗಿದೆ. ಇಂತಹ ಸಂದರ್ಭದಲ್ಲಿ ಆಡಳಿತ ಸಮಿತಿಯನ್ನು ಅಥವಾ ಆಡಳಿತಾಧಿಕಾರಿಯನ್ನು ನೇಮಿಸಿದರೆ ಸ್ಥಳೀಯ ಸಮಸ್ಯೆಗಳ ಅರಿವನ್ನು ಹೊಂದಿರದ ಇವರು ಜನರಿಗೆ ಸರಿಯಾಗಿ ಹಾಗೂ ಸೂಕ್ತ ಸಮಯದಲ್ಲಿ ಸ್ಪಂದನೆ ಮಾಡುವುದು ಕಷ್ಟ ಸಾಧ್ಯವಾಗಿರುತ್ತದೆ. . ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ

ಕರ್ನಾಟಕ ಸರ್ಕಾರ

# ಗ್ರಾಮ ಪಂಚಾಯತ ಕಾರ್ಯಾಲಯ, ಉಳವಿ -581187

ತಾಲೂಕ : ಜೋಯಿಡಾ. ಜಿಲ್ಲಾ : ಉತ್ತರ ಕನ್ನಡ

ದೂರವಾಣಿ ಸಂಖ್ಯೆ : 08383-250821

ಅಧ್ಯಕ್ಷರು : ಶ್ರೀ ಮಂಜುನಾಥ ಅರ್ಜುನ ಮೊಕಾಶಿ

ಮೊಬೈಲ್ ನಂ.: 94810 50892

ಮೇಲ್ : mamokashi20@gmail.com

E-mail : gpulavi@gmail.com

ದಿನಾಂಕ.....................

ಅರ್ಪಿಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನೂ ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ. ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸಿರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರಿಯುತ್ತಿರುವ ಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತದ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ. ಇದೇ ಪಂಚಾಯತದ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಅಧ್ಯಕ್ಷರು
ಗ್ರಾಮ ಪಂಚಾಯತ ಉಳವಿ

ಗ್ರಾಮ ಪಂಚಾಯತ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಉಳವಿ ಗ್ರಾಮ ಪಂಚಾಯತ, ಜೋಯಿಡಾ ತಾಲೂಕು, ಉತ್ತರ ಕನ್ನಡ ಜಿಲ್ಲೆ

ಸ್ಥಳ: ಉಳವಿ
ದಿನಾಂಕ: 08/05/2020

ಅಧ್ಯಕ್ಷರು
ಗ್ರಾಮ ಪಂಚಾಯತ ಉಳವಿ

ಯಥಾ ಪ್ರತಿ:

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ ಹಕ್ಕೊತ್ತಾಯ ಆಂದೋಲನ, ಕರ್ನಾಟಕ

ಉಪಾಧ್ಯಕ್ಷರು
ಗ್ರಾಮ ಪಂಚಾಯತಿ ಉಳವಿ